# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1194

ವಿಧಾನ ಪರಿಷತ್ತಿನ ಸದಸ್ಯರ ಹೆಸರು : ಶ್ರೀ ಸುನೀಲ್ ವಲ್ಯಾಪುರ್ (ವಿಧಾನ ಸಭೆಯಿಂದ ಚುನಾಯಿತರಾದವರು)

ಉತ್ತರಿಸಬೇಕಾದ ದಿನಾಂಕ : 07.03.2022

ಉತ್ತರಿಸುವ ಸಚಿವರು : ಅರಣ್ಯ ಮತ್ತು ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಹಾಗೂ ಕಾನೂನು ಮಾಪನಶಾಸ್ತ್ರ ಇಲಾಖಾ ಸಚಿವರು.

<table>
<tr><th>ಕ್ರ. ಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ</td><td>ರಾಜ್ಯದಲ್ಲಿ ಎ.ಪಿ.ಎಲ್. ಮತ್ತು ಬಿ.ಪಿ.ಎಲ್. ಕಾರ್ಡ್‌ಗಳನ್ನು ಹೊಂದಿರುವವರಿಗೆ ಸರ್ಕಾರದಿಂದ ಸಿಗುವ ಸೌಲಭ್ಯಗಳೇನು; (ವಿವರ ನೀಡುವುದು)</td><td>ರಾಜ್ಯದಲ್ಲಿ ಆದ್ಯತಾ (ಬಿಪಿಎಲ್), ಅಂತ್ಯೋದಯ ಮತ್ತು ಆದ್ಯತೇತರ (ಎಪಿಎಲ್) ಪಡಿತರ ಚೀಟಿಗಳಿದ್ದು, ಸದರಿ ಪಡಿತರ ಚೀಟಿಗಳ ಫಲಾನುಭವಿಗಳಿಗೆ 2021-22 ನೇ ಸಾಲಿನಲ್ಲಿ ವಿತರಿಸಲಾಗುತ್ತಿರುವ ಆಹಾರಧಾನ್ಯಗಳ ವಿವರ ಈ ಕೆಳಕಂಡಂತಿದೆ.
<table>
<tr><th>ಪಡಿತರ ಚೀಟಿ ವರ್ಗ</th><th>ಪ್ರತಿ ಮಾಹೆ ವಿತರಿಸುತ್ತಿರುವ ಪಡಿತರ ಪ್ರಮಾಣ ಕೆ.ಜಿ.ಗಳಲ್ಲಿ</th><th>ದರ ರೂ.ಗಳಲ್ಲಿ</th></tr>
<tr><td>ಅಂತ್ಯೋದಯ</td><td>35ಕೆ.ಜಿ ಆಹಾರಧಾನ್ಯ ಪ್ರತಿ ಪಡಿತರ ಚೀಟಿಗೆ</td><td rowspan="2">ಉಚಿತ</td></tr>
<tr><td>ಆದ್ಯತಾ (ಬಿಪಿಎಲ್)</td><td>ಪಡಿತರ ಚೀಟಿಯ ಪ್ರತಿ ಸದಸ್ಯರಿಗೆ 5 ಕೆ.ಜಿ ಆಹಾರಧಾನ್ಯ ಹಾಗೂ ಪ್ರತಿ ಪಡಿತರ ಚೀಟಿಗೆ 2 ಕೆ.ಜಿ. ಗೋಧಿ</td></tr>
<tr><td>ಆದ್ಯತೇತರ (ಎಪಿಎಲ್)</td><td>ಏಕ ಸದಸ್ಯ ಪಡಿತರ ಚೀಟಿಗೆ 5 ಕೆ.ಜಿ ಅಕ್ಕಿ, ಇಬ್ಬರಿಗಿಂತ ಹೆಚ್ಚಿನ ಸದಸ್ಯರಿರುವ ಪಡಿತರ ಚೀಟಿಗೆ 10 ಕೆ.ಜಿ ಅಕ್ಕಿ</td><td>ಪ್ರತಿಕೆ.ಜಿ.ಗೆ ರೂ.15/- ರಂತೆ</td></tr>
</table>
</td></tr>
</table>

| | | |
|---|---|---|
| ಆ | ಹಾಗಿದ್ದಲ್ಲಿ, ಉತ್ತರ ಕರ್ನಾಟಕದ ನ್ಯಾಯಬೆಲೆ ಅಂಗಡಿಗಳಲ್ಲಿ ಜೋಳ ಮತ್ತು ಗೋಧಿ ನೀಡುವ ಬಗ್ಗೆ ಸರ್ಕಾರ ಚಿಂತಿಸುವುದೇ? | ಪ್ರಸ್ತುತ ರಾಜ್ಯದಲ್ಲಿರುವ ಎಲ್ಲಾ ಅಂತ್ಯೋದಯ ಪಡಿತರ ಚೀಟಿಗೆ 2 ಕೆ.ಜಿ. ಗೋಧಿಯನ್ನು ಉಚಿತವಾಗಿ ವಿತರಣೆ ಮಾಡಲಾಗುತ್ತಿದೆ. 2021-22 ನೇ ಸಾಲಿನ ಮುಂಗಾರು ಋತುವಿನಲ್ಲಿ ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿ ಸಂಗ್ರಹಿಸಲಾಗುವ ಜೋಳದ ಪ್ರಮಾಣವನ್ನು ಲಭ್ಯತೆಗನುಗುಣವಾಗಿ ಸಾರ್ವಜನಿಕ ವಿತರಣಾ ಪದ್ಧತಿಯಡಿ ಉತ್ತರ ಕರ್ನಾಟಕದ ನ್ಯಾಯಬೆಲೆ ಅಂಗಡಿಗಳಲ್ಲಿ ವಿತರಣೆ ಮಾಡಲಾಗುವುದು. |

ಆನಾಸ 47 ಡಿಆರ್‌ಎ 2022 (ಇ-ಆಫೀಸ್)

(ಉಮೇಶ ವಿ. ಕತ್ತಿ)
ಅರಣ್ಯ ಮತ್ತು ಆಹಾರ, ನಾಗರಿಕ ಸರಬರಾಜು
ಮತ್ತು ಗ್ರಾಹಕರ ವ್ಯವಹಾರಗಳ ಹಾಗೂ
ಕಾನೂನು ಮಾಪನಶಾಸ್ತ್ರ ಇಲಾಖಾ ಸಚಿವರು.